ಕರ್ನಾಟಕ ಸರ್ಕಾರ

<u>ತಾಂತ್ರಿಕ ಶಿಕ್ಷಣ ಇಲಾಖೆ</u>

ಸಂಖ್ಯೆ: ಬಿಟಿಇ/03/ಇಸಿಎಸ್(2)/2017

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ: 01-07-2017

<u>ಜ್ಞಾಪನ</u>

ವಿಷಯ: 2017 ರ ಏಪ್ರಿಲ್/ಮೇ ಸೆಮಿಸ್ಟರ್ ಡಿಪ್ಲೋಮಾ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳಿಂದ ಜರುಗಿದ ಮಾಲ್ ಪ್ರಾಕ್ಟೀಸ್ ಪ್ರಕರಣಗಳು/ ಲೋಪದೋಷ ಪ್ರಕರಣಗಳ ವಿಚಾರಣೆ ನಡೆಸುವ ಕುರಿತು.

ಉಲ್ಲೇಖ: ಈ ಕಛೇರಿ ಜ್ಞಾಪನ ಸಂ:ಬಿಟಿಇ/03/ಇಸಿಎಸ್(2)/2017 ದಿ:23-06-2017

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಪರೀಕ್ಷಾ ಮಂಡಳಿಯ 2017 ರ ಏಪ್ರಿಲ್/ಮೇ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಮಾಲ್ ಪ್ರಾಕ್ಟೀಸ್ ಪ್ರಕರಣಗಳಲ್ಲಿ ಭಾಗಿಯಾಗಿರುವ /ಲೋಪದೋಷ ಎಸಗಿರುವ ಬಗ್ಗೆ ತಾಂತ್ರಿಕ ಪರೀಕ್ಷಾ ಮಂಡಳಿಯು ದಿನಾಂಕ:27-06-2017 ರಿಂದ 03-07-2017 ರವರೆಗೆ ವಿದ್ಯಾರ್ಥಿಗಳನ್ನು ವಿಚಾರಣೆಗೊಳಪಡಿಸಲು ಕ್ರಮಕೈಗೊಂಡಿತ್ತು. ಆದಾಗ್ಯೂ ಕೆಲ ವಿದ್ಯಾರ್ಥಿಗಳು ವಿಚಾರಣೆಗೆ ಗೈರು ಹಾಜರಾಗಿರುವುದು ಕಂಡು ಬಂದಿರುತ್ತದೆ. ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ಹಿತದೃಷ್ಟಿಯಿಂದ ಸದರಿ ವಿಚಾರಣೆಗೆ ಗೈರುಹಾಜರಾದ ವಿದ್ಯಾರ್ಥಿಗಳ ವಿಚಾರಣೆಯನ್ನು **<u>ದಿನಾಂಕ: 05-07-2017</u>** ರಂದು ಅಂತಿಮವಾಗಿ ನಡೆಸಲು ತೀರ್ಮಾನಿಸಲಾಗಿದ್ದು, ವಿದ್ಯಾರ್ಥಿಗಳು ಈ ವಿಚಾರಣೆಗೆ ತಪ್ಪದೇ ಹಾಜರಾಗಲು ತಿಳಿಸಲಾಗಿದೆ. ಹಾಗೊಂದು ವೇಳೆ ಗೈರುಹಾಜರಾದಲ್ಲಿ ಮುಂದೆ ಯಾವುದೇ ವಿಚಾರಣೆ ನಡೆಸದೆ ಪ್ರಕರಣದ ಬಗ್ಗೆ ಏಕಪಕ್ಷೀಯವಾಗಿ ತೀರ್ಮಾನ ಕೈಗೊಳ್ಳಲಾಗುವುದೆಂದು ತಿಳಿಸಿದೆ ಹಾಗೂ ಈ ಮಾಹಿತಿಯನ್ನು ಸಂಬಂಧಿಸಿದ ವಿದ್ಯಾರ್ಥಿಗಳ ಗಮನಕ್ಕೆ ತರುವಂತೆ ಸಂಸ್ಥೆಯ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ಇ- ಆಡಳಿತ -ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2) ಗಣಕ ಕೇಂದ್ರ - ವೆಬ್‌ಪೋರ್ಟಲ್ ನಲ್ಲಿ ಮತ್ತು <u>www.btekarlinx.net</u> ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
3) ಕಾರ್ಯದರ್ಶಿಯವರ ಆಪ್ತ ಶಾಖೆ
4) ಕಡತಕ್ಕೆ